# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ | : | 970 |
| 2 | ಸದಸ್ಯರ ಹೆಸರು | : | ಶ್ರೀ ಸಿ ಎನ್ ಮಂಜೇಗೌಡ,<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3 | ಉತ್ತರಿಸ ಬೇಕಾದ ದಿನಾಂಕ | : | 21.09.2022 |
| 4 | ಉತ್ತರಿಸುವ ಸಚಿವರು | : | ಮಾನ್ಯ ವಸತಿ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಮೈಸೂರಿನ ಮಂಡಕಳ್ಳಿಯಲ್ಲಿರುವ ವಿಮಾನ ನಿಲ್ದಾಣ ಎಷ್ಟು ಎಕರೆ ಪ್ರದೇಶದ ವಿಸ್ತೀರ್ಣವನ್ನು ಹೊಂದಿದೆ; ಈ ವಿಮಾನ ನಿಲ್ದಾಣಕ್ಕೆ ಇಲ್ಲಿಯವರೆಗೂ ಖರ್ಚಾಗಿರುವ ಹಣವೆಷ್ಟು; (ವಿವರವಾದ ಮಾಹಿತಿ ನೀಡುವುದು) | ಮೈಸೂರು ವಿಮಾನ ನಿಲ್ದಾಣ ಸುಮಾರು 507 ಎಕರೆ ವಿಸ್ತೀರ್ಣವನ್ನು ಹೊಂದಿದೆ. ವಿಮಾನ ನಿಲ್ದಾಣಕ್ಕೆ ಅಂದಾಜು ರೂ. 150 ಕೋಟಿಗಳ ವೆಚ್ಚವಾಗಿರುತ್ತದೆ. |
| ಆ) | ಹಾಲಿ ಇರುವ ವಿಮಾನ ನಿಲ್ದಾಣದಲ್ಲಿ ಎಷ್ಟು ವಿಮಾನಗಳು ಬಂದು ಹೋಗುವ ಸಾಮರ್ಥ್ಯವನ್ನು ಹೊಂದಿದೆ; (ವಿವರ ನೀಡುವುದು | ಹಾಲಿ ಇರುವ ಮೈಸೂರು ವಿಮಾನ ನಿಲ್ದಾಣದಲ್ಲಿ ಪ್ರಸ್ತುತ 8 ವಿಮಾನಗಳ ಹಾರಾಟ ನಡೆಸುತ್ತಿದ್ದು, ಏಕ ಕಾಲದಲ್ಲಿ 3 ವಿಮಾನಗಳ ಲ್ಯಾಂಡಿಂಗ್ ಆಗುವ ಸಾಮರ್ಥ್ಯವನ್ನು ಹೊಂದಿದೆ. |
| ಇ) | ಪ್ರಯಾಣಿಕರ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿರುವುದರಿಂದ ಮೈಸೂರಿನ ವಿಮಾನ ನಿಲ್ದಾಣವನ್ನು ಅಂತಾರಾಷ್ಟ್ರೀಯ ಮಟ್ಟಕ್ಕೇರಿಸಲು ಅಥವಾ ವಿಸ್ತರಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ? | ಪ್ರಸ್ತುತ ಇರುವ ವಿಮಾನ ನಿಲ್ದಾಣವನ್ನು ಏರ್ ಬಸ್-320 ವಿಮಾನಗಳ ಹಾರಾಟಕ್ಕೆ ಅನುವಾಗುವಂತೆ ರನ್-ವೇ ವಿಸ್ತರಿಸಲು ಭೂಸ್ವಾಧೀನ ಪ್ರಕ್ರಿಯೆಯನ್ನು ರಾಜ್ಯ ಸರ್ಕಾರ ಕೈಗೆತ್ತಿಕೊಂಡಿದೆ. ರನ್-ವೇ ವಿಸ್ತರಣೆ ಮತ್ತು ಇನ್ನಿತರ ಸಿವಿಲ್ ಕಾಮಗಾರಿಗಳನ್ನು ಭಾರತೀಯ ವಿಮಾನ ನಿಲ್ದಾಣಗಳ ಪ್ರಾಧಿಕಾರವು ಕೈಗೆತ್ತಿಕೊಳ್ಳುವುದು. |
| ಈ) | ಹಾಗಿದ್ದಲ್ಲಿ, ನಿಲ್ದಾಣ ಹಾಗೂ ರನ್ವೇಯನ್ನು ವಿಸ್ತರಿಸಲು ಹೆಚ್ಚುವರಿಯಾಗಿ ಎಷ್ಟು ಎಕರೆ ಜಮೀನು ಬೇಕಾಗಿರುತ್ತದೆ ಮತ್ತು ಈ ಜಮೀನನ್ನು ಸ್ವಾಧೀನ ಪಡಿಸಿಕೊಳ್ಳಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳು ಏನು; (ವಿವರ ನೀಡುವುದು) | ವಿಮಾನ ನಿಲ್ದಾಣದ ರನ್-ವೇ ವಿಸ್ತರಿಸಲು ಹೆಚ್ಚುವರಿಯಾಗಿ 240 ಎಕರೆ ಜಮೀನುಗಳ ಅವಶ್ಯವಿರುತ್ತದೆ. ಈ ಜಮೀನನ್ನು ಕೆ.ಐ.ಎ.ಡಿ.ಬಿ.ವತಿಯಿಂದ ಸ್ವಾಧೀನಪಡಿಸಿಕೊಳ್ಳಲು ದಿ:16.04.2022ರ ಸರ್ಕಾರದ ಆದೇಶದಲ್ಲಿ ಆಡಳಿತಾತ್ಮಕ ಅನುಮೋದನೆಯನ್ನು ಹೊರಡಿಸಲಾಗಿದೆ. |

| | | |
|---|---|---|
| ಉ) | ಜಮೀನು ಸ್ವಾಧೀನಕ್ಕೆ ಮತ್ತು ವಿಮಾನ ನಿಲ್ದಾಣವನ್ನು ಅಭಿವೃದ್ಧಿಪಡಿಸಲು ಹಾಗೂ ಇತರೆ ಮೂಲಭೂತಸೌಕರ್ಯಗಳಿಗೆ ಸರ್ಕಾರ ಒದಗಿಸಿರುವ ಹಣವೆಷ್ಟು; (ಮಾಹಿತಿ ನೀಡುವುದು)0 | ಕೆ.ಐ.ಎ.ಡಿ.ಬಿ. ವತಿಯಿಂದ ಜಮೀನು ಸ್ವಾಧೀನಕ್ಕಾಗಿ ರೂ.319.13 ಕೋಟಿಗಳಿಗೆ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿದ್ದು, ಪ್ರಸ್ತುತದವರೆಗೆ ರೂ.50.00 ಕೋಟಿಗಳನ್ನು ಕೆ.ಐ.ಎ.ಡಿ.ಬಿ.ಗೆ ಬಿಡುಗಡೆ ಮಾಡಲಾಗಿದೆ. ಭಾರತೀಯ ವಿಮಾನ ನಿಲ್ದಾಣಗಳ ಪ್ರಾಧಿಕಾರವು ಮೂಲಸೌಲಭ್ಯ ಗಳನ್ನು ಒದಗಿಸಲು ಕ್ರಮವಹಿಸುತ್ತದೆ. |
| ಊ) | ಸದರಿ ವಿಮಾನ ನಿಲ್ದಾಣವನ್ನು ಅಂತಾರಾಷ್ಟ್ರೀಯ ಮಟ್ಟಕ್ಕೆ ಏರಿಸಲು ಅಥವಾ ವಿಸ್ತರಿಸಿ ಅಭಿವೃದ್ಧಿಪಡಿಸುವ ಕಾಮಗಾರಿಗಳನ್ನು ಯಾವಾಗ ಕೈಗೊಳ್ಳಲಾಗುವುದು; ಈ ಕಾಮಗಾರಿಯನ್ನು ಪೂರ್ಣಗೊಳಿಸಲು ನಿಗಧಿತ ಗುರಿಯನ್ನು ಹಮ್ಮಿಕೊಳ್ಳಲಾಗಿದೆಯೇ? (ಸಂಪೂರ್ಣ ಮಾಹಿತಿ ನೀಡುವುದು) | ಮೈಸೂರು ವಿಮಾನ ನಿಲ್ದಾನದ ರನ್-ವೇ ವಿಸ್ತರಣೆಯ ಸಲುವಾಗಿ ಭೂಸ್ವಾಧೀನ ಪ್ರಕ್ರಿಯೆಯು ಚಾಲ್ತಿಯಲ್ಲಿರುತ್ತದೆ. ಭಾರತೀಯ ವಿಮಾನ ನಿಲ್ದಾಣಗಳ ಪ್ರಾಧಿಕಾರವು ರನ್-ವೇ ವಿಸ್ತರಣೆ ಹಾಗೂ ಇನ್ನಿತರ ಸಿವಿಲ್ ಕಾಮಗಾರಿಗಳಿಗಾಗಿ ವಿಸ್ತೃತ ಯೋಜನಾ ವರದಿಯನ್ನು ತಯಾರಿಸಲು ಕ್ರಮವಹಿಸುತ್ತಿದೆ. |

ಸಂಖ್ಯೆ:ಮೂಅಇ 154 ರಾಅವಿ 2022

**(ವಿ.ಸೋಮಣ್ಣ)**
ವಸತಿ ಹಾಗೂ ಮೂಲಸೌಲಭ್ಯ
ಅಭಿವೃದ್ಧಿ, ಸಚಿವರು